**ದಿನಾಂಕಃ 28-01-2021 ರಂದು ಪ್ರಮಾಣವಚನ ಬೋಧಿಸಲಾಯಿತು.**

**:: ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ವಿ ಆರ್ ಎನ್ ವಕೀಲರಿಂದ ::**

ನಾನು ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದು, ಪ್ರಮಾಣಪತ್ರದಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯವಾಗಿದೆ ಎಂದು ಪ್ರಮಾಣೀಕರಿಸುತ್ತೇನೆ. ಪ್ರಮಾಣಪತ್ರವನ್ನು ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸದರಿ ಪ್ರಕರಣದಲ್ಲಿ ನಾನು ಹಾಜರುಪಡಿಸಿರುವ ದಾಖಲೆಗಳನ್ನು ಈಗ ನೋಡುತ್ತಿದ್ದೇನೆ, ಅವುಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು.

1. ನಮ್ಮ ಕುಟುಂಬದ ವಂಶವೃಕ್ಷದ ನೋಟರೀಕೃತ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1
2. ದಿಃ 21/04/1980 ರಂದು ಆದ ವಿಭಾಗಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2
3. 1979-80 ನೇ ಸಾಲಿನ ಹಕ್ಕು ಬದಲಾವಣೆ ವಹಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3
4. ಸ.ನಂಃ 100 ರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4
5. ಸ.ನಂಃ 97 ರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5
6. ಸ.ನಂಃ 99 ರಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6
7. ಸ.ನಂಃ 72 ರ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7
8. ಸ.ನಂಃ 99 ರ ಋಣಭಾರರಾಹಿತ್ಯ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8
9. ಸ.ನಂಃ 100 ರ ಋಣಭಾರರಾಹಿತ್ಯ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9
10. ಸ.ನಂಃ 97 ರ ಋಣಭಾರರಾಹಿತ್ಯ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯವನ್ನು ನೀಡಿ ಮುಖ್ಯ ವಿಚಾರಣೆ ಮುಂದೂಡಲಾಯಿತು.)

**(ದಿನಾಂಕಃ 28-01-2021 ರಂದು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ**

**ಪ್ರ.ದ.ನ್ಯಾ.ದಂಃ ಶೃಂಗೇರಿ**

**ಸಾಕ್ಷಿ ಸಹಿಃ**